ಈಶ ನಿನ್ನ ಚರಣ ಭಜನೆ ಆಶೆಯಿಂದ ಮಾಡುವೆನು
ದೋಷರಾಶಿ ನಾಶಮಾಡು ಶ್ರೀಶ ಕೇಶವ ।೧।

ಶರಣು ಹೊಕ್ಕೆನಯ್ಯ ಎನ್ನ ಮರಣ ಸಮಯದಲ್ಲಿ ನಿನ್ನ
ಚರಣ ಸ್ಮರಣೆ ಕರುಣಿಸಯ್ಯಾ ನಾರಾಯಣ ।೨।

ಶೋಧಿಸೆನ್ನ ಭವದ ಕಲುಶ ಭೋದಿಸಯ್ಯ ಜ್ಞಾನವೆನಗೆ
ಬಾಧಿಸುವ ಯಮನ ಬಾಧೆ ಬಿಡಿಸು ಮಾಧವಾ ।೩।

ಹಿಂದನೇಕ ಯೋನಿಗಳಲಿ ಬಂದು ಬಂದು ನೊಂದೆನಯ್ಯ
ಇಂದು ಭವದ ಬಂಧ ಬಿಡಿಸು ತಂದೆ ಗೋವಿಂದಾ ।೪।

ಭ್ರಷ್ಟನೆನಿಸ ಬೇಡ ಕೃಷ್ಣ ಇಷ್ಟು ಮಾತ್ರ ಬೇಡಿಕೊಂಬೆ
ಶಿಷ್ಟರೊಡನೆ ಇಷ್ಟು ಕಷ್ಟ ಬಿಡಿಸು ವಿಷ್ಣುವೇ ।೫।

ಮದನನಯ್ಯ ನಿನ್ನ ಮಹಿಮೆ ವದನದಲ್ಲಿ ನುಡಿಯುವಂತೆ
ಹೃದಯದೊಳಗೆ ಹುದುಗಿಸಯ್ಯ ಮಧುಸೂಧನಾ ।೬।

ಕವಿದುಕೊಂಡು ಇರುವ ಪಾಪ ಸವೆದು ಪೋಗುವಂತೆ ಮಾಡೊ
ಜವನ ಬಾಧೆಯನ್ನು ಬಿಡಿಸು ತ್ರಿವಿಕ್ರಮಾ ।೭।

ಕಾಮಜನಕ ನಿನ್ನ ನಾಮ ಪ್ರೇಮದಿಂದ ಪಾಡುವಂತ
ನೇಮವೆನಗೆ ಪಾಲಿಸಯ್ಯ ಸ್ವಾಮಿ ವಾಮನಾ ।೮।

ಮೊದಲು ನಿನ್ನ ಪಾದ ಪೂಜೆ ಒದಗುವಂತೆ ಮಾಡೋ ಎನ್ನ
ಹೃದಯಲ್ಲಿ ಸದನ ಮಾಡೊ ಮುದದಿ ಶ್ರೀಧರ ।೯।

ಹುಸಿಯನಾಡಿ ಹೊಟ್ಟೆ ಹೊರೆವ ವಿಷಯದಲ್ಲಿ ರಸಿಕನೆಂದು
ಹುಸಿಗೆ ಹಾಕದೀರಯ್ಯ ಹೃಷೀಕೇಶನೇ ।೧೦।

ಬಿದ್ದು ಭವದನೇಕ ಜನುಮ ಬದ್ಧನಾಗಿ ಕಲುಶದಿಂದ
ಗೆದ್ದುಪೋಪ ಬುದ್ಧಿ ತೋರೋ ಪದ್ಮನಾಭನೆ ।೧೧।

ಕಾಮ ಕ್ರೋಧ ಬಿಡಿಸಿ ನಿನ್ನ ನಾಮ ಜಿಹ್ವೆಯೊಳಗೆ ನುಡಿಸೊ
ಶ್ರೀ ಮಹಾನುಭಾವನಾದ ದಾಮೋದರಾ ।೧೨।

ಪಂಕಜಾಕ್ಷ ನೀನು ಎನ್ನ ಮಂಕು ಬುದ್ಧಿಯನ್ನು ಬಿಡಿಸಿ
ಕಿಂಕರನ್ನ ಮಾಡಿಕೊಳ್ಳೊ ಸಂಕರುಷಣಾ ।೧೩।

ಏಸು ಜನುಮ ಬಂದರೇನು ದಾಸನಲ್ಲ ವೇನೊ ನಾನು
ಘಾಸಿ ಮಾಡದಿರು ಎನ್ನ ವಾಸುದೇವನೇ ।೧೪।

ಬುದ್ಧಿ ಶೂನ್ಯನಾಗಿ ಎನ್ನ ಬದ್ಧ ಕಾರ್ಯ ಕುಹಕಮನವ
ತಿದ್ದಿ ಹೃದಯ ಶುದ್ಧಿ ಮಾಡೊ ಪ್ರದ್ಯುಮ್ನನೇ ।೧೫।

ಜನನಿಜನಕ ನೀನೆ ಎಂದು ನೆನೆವೆನಯ್ಯ ದೀನ ಬಂಧು
ಎನಗೆ ಮುಕ್ತಿ ಪಾಲಿಸಯ್ಯ ಅನಿರುದ್ಧನೇ ।೧೬।

ಹರುಷದಿಂದ ನಿನ್ನ ನಾಮ ಸ್ಮರಿಸುವಂತೆ ಮಾಡು ನೇಮ
ವಿರಿಸು ಚರಣದಲ್ಲಿ ಪುರುಷೋತ್ತಮಾ ।೧೭।

ಸಾಧುಸಂಗ ಕೊಟ್ಟು ನಿನ್ನ ಪಾದಭಜನೆಯಿಟ್ಟು ಎನ್ನ
ಭೇದಮಾದಿ ನೋಡದಿರೋ ಶ್ರೀ ಅಧೋಕ್ಷಜಾ ।೧೮।

ಚಾರು ಚರಣ ತೋರಿ ಎನಗೆ ಪಾರುಗಾಣಿಸಯ್ಯ ಕೊನೆಗೆ
ಭಾರ ಹಾಕುತಿರುವೆ ನಿನಗೆ ನಾರಸಿಂಹನೇ ।೧೯।

ಸಂಚಿತಾರ್ಥ ಪಾಪಗಳನು ಕಿಂಚಿತಾದ ಪೀಡೆಗಳನು
ಮುಂಚಿತವಾಗಿ ಕಳೆದು ಪೊರೆಯೊ ಸ್ವಾಮಿ ಅಚ್ಚ್ಯುತಾ ।೨೦।

ಜ್ಞಾನ ಭಕ್ತಿ ಕೊಟ್ಟು ನಿನ್ನ ಧ್ಯಾನದಲ್ಲಿಯಿಟ್ಟು ಸದಾ
ಹೀನ ಬುದ್ಧಿ ಬಿಡಿಸು ಮುನ್ನ ಶ್ರೀ ಜನಾರ್ಧನ ।೨೧।

ಜಪತಪಾನುಷ್ಠಾನ ವಿಲ್ಲದೆ ಕುಪತಗಾಮಿಯಾದ ಎನ್ನ
ಕೃಪೆಯಮಾಡಿ ಕ್ಷಮಿಸಬೇಕು ಹೇ ಉಪೇಂದ್ರನೇ ।೨೨।

ಮೊರೆಯ ಇಡುವೆನಯ್ಯ ನಿನಗೆ ಶರಧಿ ಶಯನ ಶುಭಮತಿಯ
ಇರಿಸು ಭಕ್ತನೆಂದು ಪರಮಪುರುಶ ಶ್ರೀ ಹರೀ ।೨೩।

ಪುಟ್ಟಿಸಲೇಬೇಡ ಇನ್ನು ಪುಟ್ಟಿಸಿದಕೆ ಪಾಲಿಸೆನ್ನ
ಇಷ್ಟು ಮಾತ್ರ ಬೇಡಿಕೊಂಬೆ ಶ್ರೀ ಕೃಷ್ಣನೇ ।೨೪।

ಸತ್ಯವಾದ ನಾಮಗಳನು ನಿತ್ಯದಲ್ಲಿ ಪಠಿಸುವವರ
ಅರ್ಥಿಯಿಂದ ಸಲಹುವನು ಕರ್ತೃ ಕೇಶವಾ ।೨೫।

ಮರೆಯದಲೆ ಹರಿಯನಾಮ ಬರೆದು ಓದಿ ಕೇಳಿದವಗೆ
ಕರೆದು ಮುಕ್ತಿ ಕೊಡುವ ನೆಲೆಯಾದಿಕೇಶವಾ ।ಈಶ।